**<u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.</u>**

**<u>ಸಿ.ಸಿ. 34/2024</u>**

**<u>ಪಿರ್ಯಾದುದಾರರು</u> ಃ** ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

**-ವಿರುದ್ಧ-**

**<u>ಆರೋಪಿ/ತರು</u> ಃ** ಮಂಜುನಾಥ

**<u>-ಃದೋಷಾರೋಪಣೆಃ-</u>**

**ಶ್ರೀ ವೈದ್ಯ ಶ್ರೀಕಾಂತ್,** ಬಿ.ಎಸ್‌ಇ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಮಂಜುನಾಥ ಬಿನ್ ಈಶ್ವರಪ್ಪ, 43 ವರ್ಷ, ಚಾಲಕ, ವಾಸಃಬಾಲಾಜಿ ಹೌಸ್, ಗಣೇಶ ದೇವಸ್ಥಾನ ಎದುರು, ಭುವನೇಶ್ವರಿ ನಗರ, ಉತ್ತರಹಳ್ಳಿ, ಬೆಂಗಳುರು ನಗರ.

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ25.09.2023 ರಂದು ರಾತ್ರಿ ವೇಳೆ ತರೀಕೆರೆ ಪಟ್ಟಣದ ಗಿರಿನಗರದ 06 ನೇ ಕ್ರಾಸ್ ನಲ್ಲಿ ವಾಸವಾಗಿರುವ ಚಾಸಾ-1 ರವರ ಮನೆಯ ಮುಂಬಾಗಿಲನ್ನು ಆರೋಪಿಯಾದ ನೀವು ಕಬ್ಬಿಣದ ರಾಡ್ ನಿಂದ ಮೀಟಿ ತೆಗೆದು ಕಳ್ಳತನ ಮಾಡುವ ಉದ್ದೇಶದಿಂದ ಒಳ ಪ್ರವೇಶ ಮಾಡಿದ್ದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆಯ ಕಲಂ.457** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತುಸಮಯದಲ್ಲಿ ಆರೋಪಿಯಾದ ನೀವು ಸದರಿ ಮನೆಯೊಳಗೆ ಒಳಪ್ರವೇಶ ಮಾಡಿ ಗಾಡ್ರೇಜ್ ಬೀರುವನ್ನು ಹಾಗೂ ಅದರ ಲಾಕರ್ ನ್ನು ಅದೇ ಕಬ್ಬಿಣದ ರಾಡ್ ನಿಂದ ಮೀಟಿ

ತೆಗೆದು ಅದರಲ್ಲಿದ್ದ 05 ಗ್ರಾಂ ತೂಕದ 02 ಚಿನ್ನದ ಉಂಗುರ, 50,000/- ರೂ. ನಗದು, ಒಂದು ಜೊತೆ ಬೆಳ್ಳಿಯ ಕಾಲು ಚೈನ್, 01 ಬೆಳ್ಳಿಯ ಕಾಯಿನ್, 1 ಬೆಳ್ಳಿಯ ಸರವನ್ನು ಕಳ್ಳತನ ಮಾಡಿ ಹಾಗೂ ಬೀರುವಿನಲ್ಲಿದ್ದ 7 ರೇಷ್ಮೇ ಸೀರೆ, 6 ಜೊತೆ ಪಂಚೆ ಮತ್ತು ಶರ್ಟ್ ಹಾಗೂ ಪ್ಯಾಂಟ್ ಪೀಸ್ ಗಳನ್ನು ಕಳುವು ಮಾಡಿಕೊಂಡು ಹೋಗಿದ್ದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆಯ ಕಲಂ.380** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತುಸಮಯದಲ್ಲಿ ಆರೋಪಿಯಾದ ನೀವು ಸ್ಥಳದಲ್ಲಿ ಸಿಕ್ಕ ಕಾರಿನ ಕೀಯನ್ನು ತೆಗೆದುಕೊಂಡು ಮನೆಯ ಬಾಗಿಲ ಮುಂದೆ ನಿಂತಿದ್ದ ಕೆಎ-51/ಎಂ ಎಲ್-0835 EECO ಕಾರನ್ನು ಕಳವು ಮಾಡಿದ್ದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆಯ ಕಲಂ.379** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ

Sd/-
**(ವೈದ್ಯ ಶ್ರೀಕಾಂತ್)**
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1)ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2)ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?
ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ